

ಅರುಣ ಪಿ. ಭಟ್ಟ

## ವಾರಭವಿಷ್ಯ: 05.09.2024ರಿಂದ 11.09.2024ರವರೆಗೆ




ಮನೆಯ ದುರಸ್ತಿ, ನವೀಕರಣಕ್ಕೆ ಹಣ ಖರ್ಚು. ದಾನ ಧರ್ಮ ಕಾರ್ಯಗಳಲ್ಲಿ ಆಸಕ್ತಿ ಮೂಡುತ್ತದೆ. ಉದ್ಯೋಗದ ವಿಚಾರದಲ್ಲಿ ದೊಡ್ಡ ಮಟ್ಟದ ಅಧಿಕಾರಿಗಳು ವ್ಯವಹಾರಸ್ಥರು ವ್ಯಾಪಾರಸ್ಥರ ಜೊತೆಗೆ ಮಾತುಕತೆ ನಡೆಸುವ ಯೋಗ ಇದೆ. ಸೋದರರ ಬಾಂಧವ್ಯ ಗಟ್ಟಿಯಾಗುತ್ತದೆ. ಸಾಮಾಜಿಕ ಸ್ಥಾನಮಾನ ಉತ್ತಮವಾಗುತ್ತದೆ. ಶುಭದಿನ 09. ಸೌಂದರ್ಯ ಲಹರಿ ಪಠಿಸಿರಿ.




ಹಣಕಾಸು ವ್ಯವಹಾರದಲ್ಲಿ ಪ್ರಗತಿ. ನೀವು ಎದುರಿಸುತ್ತಿರುವ ಸಮಸ್ಯೆಗಳನ್ನು ಇತರರ ನೆರವಿನಿಂದ ಬಗೆಹರಿಸಿಕೊಳ್ಳಬಹುದು. ವಿವಾಹಿತರಿಗೆ ಸಂಗಾತಿಯೊಂದಿಗೆ ಬಾಂಧವ್ಯ ಗಟ್ಟಿಯಾಗಲಿದೆ. ವೃತ್ತಿಪರರಿಗೆ ಕೆಲಸ ಕಾರ್ಯಗಳಲ್ಲಿ ಒತ್ತಡ ಇರಲಿದೆ. ಅನಗತ್ಯ ವಿವಾದಗಳಲ್ಲಿ ನಿಮ್ಮನ್ನು ವಿರೋಧಿಗಳು ಎಳೆಯುವ ಸಾಧ್ಯತೆ ಇದೆ. ಈ ಸಮಸ್ಯೆಗೆ ಪರಿಹಾರ ಕಂಡುಕೊಳ್ಳುವಿರಿ. ಶುಭದಿನ 06. ಹನುಮಾನ್ ಚಾಲೀಸ್ ಓದಿರಿ.




ಸಂತಾನ ಅಪೇಕ್ಷಿತ ದಂಪತಿಗೆ ಶುಭ ಸುದ್ದಿಯ ಯೋಗವಿದೆ. ಶೈಕ್ಷಣಿಕ ರಂಗದಲ್ಲಿ ಪ್ರಗತಿ ಇದೆ. ಹಿರಿಯರ ಮಾರ್ಗದರ್ಶನ ದೊರೆಯಲಿದೆ. ಹೆಚ್ಚುವರಿ ಆದಾಯವನ್ನು ಮುಂದಿನ ಹಂತಕ್ಕೆ ತೆಗೆದುಕೊಂಡು ಹೋಗಲು ಸೂಕ್ತ ವೇದಿಕೆ ದೊರೆಯಲಿದೆ. ವಿರೋಧಿಗಳು ಅನಗತ್ಯ ವಾಗ್ವಾದಗಳನ್ನು ಎಳೆದು ತರಬಹುದು. ಸರಿಯಾದ ಯೋಜನೆ ರೂಪಿಸಿ. ಶುಭದಿನ 09. ಶ್ರೀ ದತ್ತಗುರು ಸ್ತೋತ್ರ ಪಠಿಸಿರಿ.




ಸೇವಾ ವಲಯದಲ್ಲಿ ಇರುವವರಿಗೆ ಅಂದುಕೊಂಡಂಥ ಫಲಿತಾಂಶ ದೊರೆಯಲಿದೆ. ನಿಮ್ಮ ಮೇಲಧಿಕಾರಿಗಳ ಜೊತೆ ಮುಖ್ಯವಾದ ಚರ್ಚೆಯಲ್ಲಿ ತೊಡಗಿಕೊಳ್ಳಲಿದ್ದೀರಿ. ಈ ಹಿಂದಿನ ಆರೋಗ್ಯ ಸಮಸ್ಯೆಗಳು ನಿವಾರಣೆ ಆಗುವ ಯೋಗ ಇದೆ. ಆರ್ಥಿಕ ಸ್ಥಿತಿ ಉತ್ತಮಪಡಿಸಿಕೊಳ್ಳುವುದಕ್ಕೆ ಅವಕಾಶ ದೊರೆಯಲಿದೆ. ಆತ್ಮೀಯರೊಂದಿಗೆ ಭಿನ್ನಾಭಿಪ್ರಾಯಗಳು ಕಾಣಿಸಿಕೊಳ್ಳಬಹುದು. ಶುಭದಿನ 08. ಲಿಂಗಾಷ್ಟಕ ಪಠಿಸಿರಿ.




ನೀವು ಕೆಲಸ ಮಾಡುತ್ತಿರುವ ಸಂಸ್ಥೆಯಲ್ಲಿ ಪ್ರಶಸ್ತಿ ಗೌರವಕ್ಕೆ ನಿಮ್ಮ ಹೆಸರನ್ನು ಸೂಚಿಸುವ ಯೋಗ ಇದೆ. ಈ ಅವಧಿಯಲ್ಲಿ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳುವ ಅವಕಾಶ ಇದೆ. ವೃತ್ತಿಪರ ಕೆಲಸಗಳನ್ನು ಈ ಹಿಂದಿಗಿಂತಲೂ ಪರಿಣಾಮಕಾರಿಯಾಗಿ ಮಾಡುವಿರಿ. ವ್ಯಾಪಾರಸ್ಥರು ವ್ಯವಹಾರಸ್ಥರಿಗೆ ಒಂದೊಳ್ಳೆ ವ್ಯಾವಹಾರಿಕ ಸಂಪರ್ಕ ದೊರೆಯಲಿದೆ. ಶುಭದಿನ 07. ಕಾಲಭೈರವನ ಸೇವೆ ಮಾಡಿರಿ.




ಕಾನೂನು ವ್ಯಾಜ್ಯ ಇದ್ದಲ್ಲಿ, ನಿಮ್ಮ ಪರವಾದ ಬೆಳವಣಿಗೆಗಳು ಆಗಲಿವೆ. ಸರಿಯಾದ ಸಮಯಕ್ಕೆ ವಿರೋಧಿಗಳಿಗೆ ತಕ್ಕ ಪ್ರತ್ಯುತ್ತರ ನೀಡಲಿದ್ದೀರಿ. ಸಾಮಾಜಿಕ ರಾಜಕೀಯ ಕ್ಷೇತ್ರದಲ್ಲಿ ಇರುವವರಿಗೆ ಮನ್ನಣೆ ಸಿಗಲಿದೆ. ವೈವಾಹಿಕ ಜೀವನ ಸಂತುಷ್ಟವಾಗಿರುತ್ತದೆ. ಪ್ರೇಮಿಗಳಿಗೆ ತಾವು ಬಹಳ ಇಷ್ಟಪಡುವವರ ಜೊತೆಗೆ ಸುಮಧುರ ಕ್ಷಣಗಳನ್ನು ಕಳೆಯುವ ಯೋಗ ಇದೆ. ಶುಭದಿನ 08. ಶ್ರೀ ಲಕ್ಷ್ಮೀಕನಕಧಾರಾ ಸ್ತೋತ್ರ ಪಠಣ ಮಾಡಿರಿ.




ಸಂಗಾತಿ, ಮಕ್ಕಳಿಗೆ ಇರುವ ಭಿನ್ನ ಆಲೋಚನೆಗಳನ್ನು ಸಹ ಒಂದು ಹಂತಕ್ಕೆ ಸರಿಪಡಿಸುವಿರಿ. ವೃತ್ತಿನಿರತರಿಗೆ ಅಂದುಕೊಂಡ ಹುದ್ದೆಯನ್ನು ತಲುಪಿಕೊಳ್ಳುವ ಅವಕಾಶ ಇದೆ. ಬಹಳ ಕಡಿಮೆ ಸಂಪನ್ಮೂಲ, ಹಣದ ಮಧ್ಯೆ ಕೆಲಸ ಮಾಡುತ್ತಿರುವವರು ಸಹ ಕೌಶಲದ ಮೂಲಕ ಯಶಸ್ಸು ಪಡೆಯುವ ಅವಕಾಶ ಇದೆ. ಈ ವಾರ ಸಂತೋಷವಾದ ಕ್ಷಣಗಳನ್ನೇ ಹೆಚ್ಚು ಕಾಣಲಿದ್ದೀರಿ. ಶುಭದಿನ 09. ವಿಷ್ಣು ಸಹಸ್ರನಾಮ ಪಠಿಸಿರಿ.




ವೃತ್ತಿಪರ ಜೀವನದಲ್ಲಿ ಅತ್ಯುತ್ತಮ ಪ್ರಗತಿ. ಹೂಡಿಕೆ ವ್ಯವಹಾರದಲ್ಲಿ ಅಂದುಕೊಂಡಂತೆಯೇ ಪ್ರಗತಿ ಸಾಧಿಸುವಿರಿ. ಅವಿವಾಹಿತರಿಗೆ ಸೂಕ್ತ ಸಂಬಂಧಗಳು ದೊರೆಯುವ ಯೋಗ ಇದೆ. ಉದ್ಯೋಗ ಸ್ಥಳದಲ್ಲಿ ಸಹೋದ್ಯೋಗಿಗಳ ಜೊತೆ ಉತ್ತಮ ಬಾಂಧವ್ಯ ಇರುತ್ತದೆ. ಈ ವಾರದಲ್ಲಿ ಆಗಾಗ ಆರೋಗ್ಯ ಸಮಸ್ಯೆಗಳು ಕಾಡಬಹುದು. ಉನ್ನತ ಸ್ಥಾನದ ಗೌರವ ದೊರೆಯಲಿದೆ. ಶುಭದಿನ 10. ಶ್ರೀ ವೆಂಕಟೇಶ್ವರ ಸ್ತೋತ್ರ ಪಠಿಸಿರಿ.




ಮಕ್ಕಳ ವೃತ್ತಿ ಜೀವನಕ್ಕೆ ಸಹಾಯ ಮಾಡಲಿದ್ದೀರಿ. ಪ್ರೀತಿ ಪ್ರೇಮದಲ್ಲಿ ಇರುವವರಿಗೆ ಬಂಧ ಇನ್ನಷ್ಟು ಗಟ್ಟಿಯಾಗಲಿದೆ. ಹಣಕಾಸು ಹೂಡಿಕೆಯಲ್ಲಿ ಅಂದುಕೊಂಡಂಥ ಫಲಿತಾಂಶ ದೊರೆಯಲಿದೆ. ಸಂಬಂಧಿಗಳ ಜೊತೆಗಿನ ಬಾಂಧವ್ಯ ಗಟ್ಟಿಯಾಗಲಿದೆ. ಈ ಹಿಂದಿನ ಮನಸ್ತಾಪಗಳು ಇದ್ದರೂ ನಿವಾರಣೆ ಆಗುತ್ತದೆ. ವಿರೋಧಿಗಳು ಕೆಲ ಸಮಸ್ಯೆಗಳನ್ನು ತಂದಿಡಬಹುದು. ಶುಭದಿನ 07. ಗುರು ರಾಘವೇಂದ್ರ ರಾಯರ ಆರಾಧನೆ ಮಾಡಿರಿ.




ಭೂಮಿ ಖರೀದಿ ವಿಚಾರದಲ್ಲಿ ಅಂದುಕೊಂಡಂತೆ ಬೆಳವಣಿಗೆಗಳು ಆಗಲಿವೆ. ಪೋಷಕರ ಜೊತೆಗಿನ ಬಾಂಧವ್ಯ ಇನ್ನಷ್ಟು ಗಟ್ಟಿಯಾಗುತ್ತದೆ. ಮಕ್ಕಳು ಕೌಶಲವನ್ನು ಹೆಚ್ಚಿಸಿಕೊಳ್ಳುವುದಕ್ಕೆ ಸಹಾಯ ಮಾಡಲಿದ್ದೀರಿ. ವೈಯಕ್ತಿಕ ಸಂಬಂಧದಲ್ಲಿ ಈ ಹಿಂದೆಂದಿಗಿಂತ ಹೆಚ್ಚು ಅಕ್ಕರೆ ಇರುತ್ತದೆ. ಸಕಾರಾತ್ಮಕ ಹಾಗೂ ಕ್ರಿಯೇಟಿವ್ ಆದ ಕೆಲಸಗಳನ್ನು ಮಾಡಲಿದ್ದೀರಿ. ಶುಭದಿನ 10. ಶಿವಕವಚ ಪಠಣ ಮಾಡಿರಿ.




ಸಾಮಾಜಿಕ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುವವರಿಗೆ ಗೌರವ ದೊರೆಯುವ ಸಾಧ್ಯತೆ. ಯಾವುದೇ ಕೆಲಸಕ್ಕೆ ಹೆಚ್ಚು ಶ್ರಮ ಹಾಕಬೇಕಾಗುತ್ತದೆ. ಯಾವ ಸಂಸ್ಥೆಯಲ್ಲಿ ಉದ್ಯೋಗ ಗಿಟ್ಟಿಸಬೇಕು ಎಂಬ ಇಚ್ಛೆ ಇರುತ್ತದೋ ಅಲ್ಲಿ ಅವಕಾಶ ದೊರೆಯಲಿದೆ. ವೈಯಕ್ತಿಕ ಸಂಬಂಧದಲ್ಲಿ ಸಂತೋಷ ಇರುತ್ತದೆ. ಹೆಚ್ಚುವರಿ ಆದಾಯ ಮೂಲದಿಂದ ಹಣಕಾಸಿನ ಹರಿವು ಹೆಚ್ಚಾಗಲಿದೆ. ಶುಭದಿನ 08. ಆದಿತ್ಯ ಹೃದಯ ಪಠಣ ಮಾಡಿರಿ.




ಸ್ಥಿರಾಸ್ತಿ ವ್ಯವಹಾರಗಳಿಗೆ ಸಂಬಂಧಿಸಿದಂತೆ ಪ್ರಗತಿ. ಪೋಷಕರ ಜೊತೆ ಮನಸ್ತಾಪಗಳು ಆಗಿದ್ದಲ್ಲಿ ನಿವಾರಣೆ ಮಾಡಿಕೊಳ್ಳಲಿದ್ದೀರಿ. ಕುಟುಂಬದಲ್ಲಿನ ಒಗ್ಗಟ್ಟು ಎಷ್ಟು ಮುಖ್ಯ ಎಂಬ ವಿಚಾರ ನಿಮಗೆ ಮನದಟ್ಟಾಗುತ್ತದೆ. ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸಬೇಕಾಗುತ್ತದೆ. ಹಣಕಾಸು ಹೂಡಿಕೆ ವ್ಯವಹಾರದಲ್ಲಿ ಒಳ್ಳೆಯ ಲಾಭ ಮಾಡುವ ಅವಕಾಶ ದೊರೆಯಲಿದೆ. ಶುಭದಿನ 06. ಶ್ರೀರಾಮರಕ್ಷಾ ಸ್ತೋತ್ರ ಓದಿರಿ.